**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ರವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರ ಉತ್ತರ.**

**ವಿಷಯ:**

ಬೆಳಗಾವಿ ಜಿಲ್ಲೆಯ ಮೇಲ್ದರ್ಜೆಗೇರಿಸಲ್ಪಟ್ಟ ನೂತನ ಪಟ್ಟಣ ಪಂಚಾಯತಿಗಳಲ್ಲಿ ಮತ್ತು ಪುರಸಭೆಗಳಲ್ಲಿ ಸಿಬ್ಬಂದಿಗಳ ಕೊರತೆ ಎದುರಿಸುತ್ತಿದ್ದು (ಆರೋಗ್ಯ ನಿರೀಕ್ಷಕರು, ಹೆಲ್ತ್ ಇನ್ಸ್‌ಪೆಕ್ಟರ್) ಕಂದಾಯ ಅಧಿಕಾರಿಗಳು, ಪರಿಸರ ಅಭಿಯಂತರರು, ತೆರಿಗೆ ವಸೂಲಿದಾರರು ಮತ್ತು ಇತರೆ ಕಛೇರಿ ಸಿಬ್ಬಂದಿಗಳ ಕೊರತೆಯಿಂದ ಆಡಳಿತಾತ್ಮಕವಾಗಿ ತೊಂದರೆಯಾಗುತ್ತಿರುವ ವಿಚಾರವಾಗಿ ಮತ್ತು ನೂತನ ಪಟ್ಟಣ ಪಂಚಾಯತಿಗಳ ಮತ್ತು ಪುರಸಭೆಗಳ ವ್ಯಾಪ್ತಿಯಲ್ಲಿ ಸಿಬ್ಬಂದಿಗಳ ಕೊರತೆಯಿಂದಾಗಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುತ್ತಿರುವ ವಿಚಾರವಾಗಿ ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರ ಗಮನ ಸೆಳೆಯ ಬಯಸಿರುವುದು.

**ಉತ್ತರ:**

ಬೆಳಗಾವಿ ಜಿಲ್ಲೆಯಲ್ಲಿ ನೂತನವಾಗಿ ಒಟ್ಟು 04 ಪುರಸಭೆಗಳು ಮತ್ತು 13 ಪಟ್ಟಣ ಪಂಚಾಯಿತಿಗಳು ಮೇಲ್ದರ್ಜೆಗೇರಿಸಲ್ಪಟ್ಟಿರುತ್ತದೆ. ಸದರಿ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಯಲ್ಲಿ ವಿವಿಧ ವೃಂದದ ಒಟ್ಟು 908 ಹುದ್ದೆಗಳು ಮಂಜೂರಾಗಿದ್ದು, ಇದರಲ್ಲಿ 175 ಹುದ್ದೆಗಳಲ್ಲಿ ಖಾಯಂ ನೌಕರರು, 256 ಗುತ್ತಿಗೆ/ಹೊರಗುತ್ತಿಗೆ/ನೇರಪಾವತಿ ಅಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಒಟ್ಟು 431 ನೌಕರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಆದ್ದರಿಂದ ಒಟ್ಟು 477 ಹುದ್ದೆಗಳು ಖಾಲಿಯಿರುತ್ತದೆ.

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರ ನೇಮಕಾತಿ ಅಡಿಯಲ್ಲಿ ಖಾಲಿ ಇರುವ ಗ್ರೂಪ್ "ಬಿ" ಮತ್ತು "ಸಿ" ವೃಂದದ ಒಟ್ಟು 530 ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಈಗಾಗಲೇ ಪ್ರಸ್ತಾವನೆ ಕಳುಹಿಸಲಾಗಿದೆ. ಅಲ್ಲದೆ, ವಿವಿಧ ವೃಂದದ ಒಟ್ಟು 471 ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿ ಪೌರಾಡಳಿತ ನಿರ್ದೇಶನಾಲಯದಲ್ಲಿ ಸ್ವೀಕೃತವಾಗಿದ್ದು, ಪ್ರಸ್ತುತ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ದಿನಾಂಕ:06.07.2020ರ ಸುತ್ತೋಲೆಯ ರೀತ್ಯಾ ತಾತ್ಕಾಲಿಕವಾಗಿ ತಡೆಹಿಡಿಯಲಾಗಿದ್ದು, ಅನುಮತಿ ದೊರೆತ ನಂತರ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮವಹಿಸಲಾಗುವುದು. ಜಿಲ್ಲಾ ಮಟ್ಟದಲ್ಲಿ ಮುಂಬಡ್ತಿ ಖೋಟಾದಡಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

ಮುಂದುವರೆದು, ಬೆಳಗಾವಿ ಜಿಲ್ಲೆಯಲ್ಲಿ ನೂತನವಾಗಿ ಮೇಲ್ದರ್ಜೆಗೇರಿಸಲ್ಪಟ್ಟ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳನ್ನು ಒಳಗೊಂಡಂತೆ ಜಿಲ್ಲೆಯಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪೌರಕಾರ್ಮಿಕರ ವಿಶೇಷ ನೇಮಕಾತಿ ಸಂಬಂಧ ಜಿಲ್ಲಾಧಿಕಾರಿಗಳು ಸಂಖ್ಯೆ ಬಿಜಿಎಂ/ಡಿಯುಡಿಸಿ/5/ಸಿಆರ್/182/2017-18, ದಿನಾಂಕ:23.02.2018ರಲ್ಲಿ ಅಧಿಸೂಚನೆ ಹೊರಡಿಸಿದ್ದು, ಸದರಿ ಅಧಿಸೂಚನೆಗೆ ರಿಟ್ ಅರ್ಜಿ ಸಂಖ್ಯೆ 101747/2018 ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ತಡೆಯಾಜ್ಞೆ ನೀಡಿ ಆದೇಶಿಸಿರುತ್ತದೆ. ಸದರಿ ಅಧಿಸೂಚನೆಗೆ ನೀಡಿರುವ ತಡೆಯಾಜ್ಞೆ ತೆರವುಗೊಂಡ ನಂತರ ನಿಯಮಾನುಸಾರ ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿಮಾಡಲಾಗುವುದು.

ಆದಾಗ್ಯೂ, ಮೇಲ್ದರ್ಜೆಗೇರಿಸಲ್ಪಟ್ಟ ನೂತನ ಪಟ್ಟಣ ಪಂಚಾಯಿತಿಗಳಲ್ಲಿ ಮತ್ತು ಪುರಸಭೆಗಳಲ್ಲಿ ಸಿಬ್ಬಂದಿಗಳ ಕೊರತೆಯಿಂದಾಗಿ ಆಡಳಿತಾತ್ಮಕವಾಗಿ ತೊಂದರೆಯಾಗದಂತೆ ಹಾಗೂ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗದಂತೆ ಮುಖ್ಯಾಧಿಕಾರಿಗಳು, ಪರಿಸರ ಅಭಿಯಂತರರು, ಕಿರಿಯ ಅಭಿಯಂತರರು, ಕರವಸೂಲಿಗಾರರು, ಪ್ರಥಮ ದರ್ಜೆ ಸಹಾಯಕರು ಹಾಗೂ ದ್ವಿತೀಯ ದರ್ಜೆ ಸಹಾಯಕರುಗಳನ್ನು ಜಿಲ್ಲೆಯಲ್ಲಿನ ಇತರೆ ನಗರ ಸ್ಥಳೀಯ ಸಂಸ್ಥೆಗಳಿಂದ ನೂತನ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳಿಗೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯೋಜಿಸಲಾಗಿರುತ್ತದೆ.

ಸಂಖ್ಯೆ: ನಅಇ 69 ಜಿಇಎಲ್ 2021 (e)

(ಎನ್. ನಾಗರಾಜ್ ಎಂಟಿಬಿ)
ಪೌರಾಡಳಿತ ಮತ್ತು ಸಕ್ಕರೆ ಸಚಿವರು